# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ - 154
ಉತ್ತರಿಸಬೇಕಾದ ದಿನಾಂಕ - 10.07.2018
ಸದಸ್ಯರ ಹೆಸರು - ಶ್ರೀ ಎಂ.ಎ.ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಹಾಸನ ಜಿಲ್ಲೆ ವ್ಯಾಪ್ತಿಯಲ್ಲಿ ಕಳೆದ 3 ವರ್ಷಗಳಿಂದ ಆಶ್ರಯ ಯೋಜನೆಯಡಿ ನಿವೇಶನಗಳನ್ನು ಹಂಚಿಕೆ ಮಾಡಲು ಎಷ್ಟು ಗ್ರಾಮಗಳಲ್ಲಿ ಜಮೀನುಗಳನ್ನು ಗುರುತಿಸಲಾಗಿದೆ; ಸದರಿ ಜಮೀನುಗಳಿಗೆ ಸರ್ಕಾರವು ನಿಗದಿಪಡಿಸಿರುವ ಮೌಲ್ಯವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು) | ಅರ್ಹ ನಿವೇಶನ ರಹಿತರಿಗೆ ನಿವೇಶನ ಹಂಚಿಕೆ ಮಾಡಲು ಗ್ರಾಮೀಣ ಪ್ರದೇಶದಲ್ಲಿ ಇಂದಿರಾ ಗ್ರಾಮೀಣ ವಸತಿ ನಿವೇಶನ ಯೋಜನೆ ಮತ್ತು ನಗರ ಪ್ರದೇಶಗಳಲ್ಲಿ ವಾಜಪೇಯಿ ನಗರ ನಿವೇಶನ ಯೋಜನೆಗಳು ಜಾರಿಯಲ್ಲಿದ್ದು, ಈ ಯೋಜನೆಗಳಡಿ ನಿವೇಶನ ಹಂಚಿಕೆ ಮಾಡಲು ಸರ್ಕಾರಿ ಜಮೀನಿಗೆ ಪ್ರಥಮ ಆದ್ಯತೆ ನೀಡಲಾಗಿದೆ. ಸರಕಾರಿ ಜಮೀನು ಲಭ್ಯವಿಲ್ಲದ ಕಡೆಗಳಲ್ಲಿ ಖಾಸಗಿ ಜಮೀನನ್ನು ಭೂ ಮಾಲೀಕರ ಸಹಮತದೊಂದಿಗೆ ಖರೀದಿಸಲು ಕ್ರಮವಹಿಸಲಾಗುತ್ತಿದೆ. |
| ಆ) | ಗುರುತಿಸಿರುವ ಜಮೀನುಗಳ ವಿಸ್ತೀರ್ಣದೊಂದಿಗೆ ಗ್ರಾಮವಾರು ವಿವರ ನೀಡುವುದು; | ಸರ್ಕಾರದ ಆದೇಶ ಸಂಖ್ಯೆ:ವಇ 33 ಹೆಚ್ಎಹೆಚ್ 2016(ಭಾ-2) ದಿನಾಂಕ:12.07.2016ರಲ್ಲಿ ಜಮೀನು ಖರೀದಿಯ ದರವನ್ನು ಈ ಕೆಳಕಂಡಂತೆ ನಿಗದಿಪಡಿಸಲಾಗಿದೆ. (ಕೆಳಗಿನ ಕೋಷ್ಟಕ ನೋಡಿ) ಖಾಸಗಿ ಜಮೀನು ಖರೀದಿಸಲು ಗ್ರಾಮೀಣ ಪ್ರದೇಶಗಳಲ್ಲಿ ಮಾರ್ಗಸೂಚಿ ದರದ ನಾಲ್ಕು ಪಟ್ಟು ಅಥವಾ ಪರಿಷ್ಕೃತ ಗರಿಷ್ಟ ಮಿತಿ ರೂ.9.00 ಲಕ್ಷಗಳು ಇದರಲ್ಲಿ ಯಾವುದು ಕಡಿಮೆಯೋ ಅದನ್ನು ಅನ್ವಯಿಸುವಂತೆ ಹಾಗೂ ನಗರ ಪ್ರದೇಶಗಳಲ್ಲಿ ಮಾರ್ಗಸೂಚಿ ಬೆಲೆಯ ಮೂರು ಪಟ್ಟು ಅಥವಾ ಆಯಾ ಸ್ಥಳೀಯ ಸಂಸ್ಥೆಗಳಿಗೆ ನಿಗದಿಪಡಿಸಲಾದ ಪರಿಷ್ಕೃತ ಗರಿಷ್ಟ ದರ ಇದರಲ್ಲಿ ಯಾವುದು ಕಡಿಮೆಯೋ ಅದನ್ನು ಅನ್ವಯಿಸುವಂತೆ ತಿಳಿಸಲಾಗಿದೆ. ಹಾಸನ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಖಾಸಗಿ ಜಮೀನು ಖರೀದಿಸುವ ಸಂಬಂಧ ಸರ್ಕಾರಕ್ಕೆ ಯಾವುದೇ ಪ್ರಸ್ತಾವನೆ ಬಂದಿರುವುದಿಲ್ಲ. ಬೇಲೂರು ತಾಲ್ಲೂಕಿನ ನಾರಾಯಣಪುರ ಗ್ರಾಮದಲ್ಲಿ ನಿವೇಶನ ಹಂಚಿಕೆಗಾಗಿ 2.20 ಎಕರೆ/ಗುಂಟೆ ಜಮೀನನ್ನು ಗುರುತಿಸಲಾಗಿದೆ. |
| ಇ) | ನಿವೇಶನ ಹಂಚಿಕೆಗಾಗಿ ವಸತಿ ರಹಿತರನ್ನು ಗುರುತಿಸಲಾಗಿದೆಯೇ; ಹಾಗಿದ್ದಲ್ಲಿ, ವಸತಿ ರಹಿತರ ಸಂಖ್ಯೆ ಎಷ್ಟು; (ತಾಲ್ಲೂಕುವಾರು/ಗ್ರಾಮವಾರು ವಿವರ ನೀಡುವುದು) | ಸಾಮಾಜಿಕ, ಆರ್ಥಿಕ ಮತ್ತು ಜಾತಿ ಜನಗಣತಿ, 2011ರ ಸಮೀಕ್ಷೆಯ ಪ್ರಕಾರ ಜಿಲ್ಲೆಯಲ್ಲಿ ನಿವೇಶನ ರಹಿತರು ಒಳಗೊಂಡಂತೆ ಒಟ್ಟಾರೆ 2,60,801 ವಸತಿ ರಹಿತರಿರುವುದು ಕಂಡು ಬಂದಿರುತ್ತದೆ. ತಾಲ್ಲೂಕು/ಗ್ರಾಮ ಪಂಚಾಯಿತಿವಾರು ಅನುಬಂಧ-ಅ ಮತ್ತು ಆ ರಲ್ಲಿ ಒದಗಿಸಲಾಗಿದೆ. |

(ಉತ್ತರ ಆ) ದಲ್ಲಿನ ಕೋಷ್ಟಕ:)

| ಕ್ರ ಸಂ. | ಪ್ರದೇಶ | ನಿಗದಿಪಡಿಸಲಾಗಿರುವ ಗರಿಷ್ಟ ದರ (ರೂ.ಲಕ್ಷಗಳಲ್ಲಿ) |
|---|---|---|
| 1 | ಗ್ರಾಮೀಣ ಪ್ರದೇಶ | 9.00 |
| 2 | ಪಟ್ಟಣ ಪಂಚಾಯಿತಿ | 12.00 |
| 3 | ಪುರಸಭೆ | 15.00 |
| 4 | ನಗರಸಭೆ | 22.50 |
| 5 | ಮಹಾನಗರ ಪಾಲಿಕೆ | 37.50 |
| 6 | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | 75.00 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಈ) | ನಿವೇಶನಗಳನ್ನು ಹಂಚಿಕೆ ಮಾಡುವ ಕುರಿತು ಕಾಲಮಿತಿಯೇನಾದರೂ ವಿಧಿಸಲಾಗಿದೆಯೇ; ಹಾಗಿದ್ದಲ್ಲಿ ಯಾವ ಕಾಲಮಿತಿಯೊಳಗೆ ಹಂಚಿಕೆ ಮಾಡಲಾಗುವುದು; ನಿವೇಶನ ಹಂಚಿಕೆ ಮಾಡಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು? | ನಿವೇಶನಗಳನ್ನು ಹಂಚಿಕೆ ಮಾಡುವ ಕುರಿತು ಕಾಲಮಿತಿ ಇರುವುದಿಲ್ಲ. ಆದರೆ ನಿವೇಶನ ರಹಿತರ ಸಂಖ್ಯೆಗೆ ಅನುಗುಣವಾಗಿ ನಿವೇಶನಗಳನ್ನು ಹಂಚಿಕೆ ಮಾಡಲು ಸ್ಥಳೀಯವಾಗಿ ಲಭ್ಯವಿರುವ ಸರಕಾರಿ ಜಮೀನನ್ನು ಬಳಸಿಕೊಳ್ಳಲು ಅವಕಾಶ ನೀಡಲಾಗಿದೆ. ಒಂದು ವೇಳೆ ಸರಕಾರಿ ಜಮೀನು ಲಭ್ಯವಿಲ್ಲದ ಸಂದರ್ಭಗಳಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಜಿಲ್ಲಾ ಜಮೀನು ಖರೀದಿ ಸಮಿತಿಯ ಮೂಲಕ ಖಾಸಗಿ ಜಮೀನನ್ನು ಭೂ ಮಾಲೀಕರ ಸಹಮತದೊಂದಿಗೆ ಖರೀದಿಸಲು ಕ್ರಮವಹಿಸಲಾಗುತ್ತಿದ್ದು, ಹಂತ ಹಂತವಾಗಿ ನಿವೇಶನ ಹಂಚಿಕೆ ಮಾಡಲು ಕ್ರಮವಹಿಸಲಾಗುತ್ತದೆ. |

ಸಂಖ್ಯೆ: ವಇ 132 ಹೆಚ್‌ಎಎಂ 2018

(ಯು.ಟಿ.ಅಬ್ದುಲ್ ಖಾದರ್)
ವಸತಿ ಸಚಿವರು.